ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 3041 (2514)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಜಸ್ಟಿಸ್ ಜಿ.ರೋಹಿಣಿಯವರ ನೇತೃತ್ವದಲ್ಲಿ ಆಯೋಗ ರಚನೆ

(ಅ) ಕೇಂದ್ರ ಸರ್ಕಾರವು ಜಸ್ಟಿಸ್ ಜಿ.ರೋಹಿಣಿಯವರ ನೇತೃತ್ವದಲ್ಲಿ ಇತರೆ ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿಯನ್ನು ಗುರುತಿಸಿ, ಶಿಫಾರಸ್ಸು ಮಾಡಲು ಆಯೋಗವನ್ನು ರಚಿಸಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಆಯೋಗವು ಸರ್ಕಾರದಿಂದ ರಾಜ್ಯದಲ್ಲಿನ ಹಿಂದುಳಿದ ವರ್ಗಗಳ ಬಗ್ಗೆ ಕೋರಿರುವ ಅಂಕಿ-ಅಂಶ, ಆಯೋಗದ ವರದಿಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಹಾಗೂ ಸರ್ಕಾರದಿಂದ ಒದಗಿಸಿರುವ ಮಾಹಿತಿಗಳ ಬಗ್ಗೆ ಪೂರ್ಣ ಮಾಹಿತಿ ನೀಡುವುದು;

(ಇ) ಈ ಆಯೋಗವು ರಾಜ್ಯಕ್ಕೆ ಭೇಟಿ ನೀಡಿ, ಹಿಂದುಳಿದ ಸಮುದಾಯದ ಮುಖಂಡರಿಂದ, ಸಂಘ-ಸಂಸ್ಥೆಗಳಿಂದ, ರಾಜ್ಯ ಸರ್ಕಾರದ ಪ್ರತಿನಿಧಿಗಳಿಂದ ಹಾಗೂ ಇತರೆ ಹಿತಾಸಕ್ತಿಯುಳ್ಳವರಿಂದ ಅಭಿಪ್ರಾಯ, ಸಲಹೆ-ಸೂಚನೆ ಪಡೆದಿದೆಯೇ? (ಸಂಪೂರ್ಣ ವಿವರ ನೀಡುವುದು)